# ಉದಯವಾಣಿ

**Thursday 10th August 2023, Page No.02**

**RVCE: Pact for implementation of Green Bengaluru**

ಅರಣ್ಯ ವಿಭಾಗದ ಆಯುಕ್ತೆ ಪ್ರೀತಿ ಗೆಹ್ಲೋಟ್ ಮಾಹಿತಿ

ಶಾಲಾ-ಕಾಲೇಜು ಶೈಕ್ಷಣಿಕ ಸಂಸ್ಥೆಗಳ ಜತೆ ಒಪ್ಪಂದ

## ಹಸಿರು ಬೆಂಗಳೂರು ಅನುಷ್ಠಾನಕ್ಕೆ ಒಡಂಬಡಿಕೆ

**ಬೆಂಗಳೂರು:** ಬ್ರ್ಯಾಂಡ್ ಬೆಂಗಳೂರು ಯೋಜನೆಯಡಿ ಹಸಿರು ಬೆಂಗಳೂರನ್ನು ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಶಾಲಾ-ಕಾಲೇಜು ಶೈಕ್ಷಣಿಕ ಸಂಸ್ಥೆಗಳ ಜತೆ ಒಡಂಬಡಿಕೆ ಮಾಡಿಕೊಂಡು ಕ್ರಮ ಕೈಗೊಳ್ಳಲಾಗಿದೆ ಎಂದು ಅರಣ್ಯ ವಿಭಾಗದ ವಿಶೇಷ ಆಯುಕ್ತೆ ಹಾಗೂ ಹಸಿರು ಬೆಂಗಳೂರಿನ ನೋಡಲ್ ಅಧಿಕಾರಿ ಪ್ರೀತಿ ಗೆಹ್ಲೋಟ್ ತಿಳಿಸಿದರು.

ಬ್ರ್ಯಾಂಡ್ ಬೆಂಗಳೂರು ಯೋಜನೆಯಡಿ ಹಸಿರು/ಪರಿಸರ ಬೆಂಗಳೂರು ವಿಷಯಕ್ಕೆ ಸಂಬಂಧಿಸಿದಂತೆ ಆರ್‌ವಿ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಬುಧವಾರ ಹಮ್ಮಿಕೊಂಡಿದ್ದ ವಿಚಾರ ಸಂಕಿರಣ ಉದ್ದೇಶಿಸಿ ಮಾತನಾಡಿದರು. ನಗರದಲ್ಲಿ ಈಗಾಗಲೇ ಶಾಲಾ-ಕಾಲೇಜು ಶೈಕ್ಷಣಿಕ ಸಂಸ್ಥೆಗಳ ಜತೆ ಒಡಂಬಡಿಕೆ ಮಾಡಿಕೊಂಡು ಸಸಿಗಳನ್ನು ನೆಟ್ಟು ಅವು ಬೆಳೆಯುವವರೆಗೆ ಪೋಷಣೆ ಮಾಡಲು ವಿದ್ಯಾರ್ಥಿಗಳಿಗೆ ಜವಾಬ್ದಾರಿ ನೀಡಲಾಗುತ್ತದೆ. ಆ ಸಸಿಗೆ ವಿದ್ಯಾರ್ಥಿಗಳ ಹೆಸರನ್ನು ಶಾಶ್ವತವಾಗಿಡುವ ಯೋಜನೆ ರೂಪಿಸಲಾಗಿದ್ದು ಈಗಾಗಲೇ ಕಾರ್ಯಪ್ರವೃತ್ತರಾಗಿ ಕೆಲಸ ಮಾಡಲಾಗುತ್ತಿದೆ ಎಂದರು.

**ಸಾರ್ವಜನಿಕರ ಸಲಹೆ ಅಧ್ಯಯನ ನಡೆಸಿ ಸರ್ಕಾರಕ್ಕೆ ಸಲ್ಲಿಕೆ:** ಮುಂದಿನ 25–30 ವರ್ಷಗಳಲ್ಲಿ ಸಂಪೂರ್ಣ ಬೆಂಗಳೂರನ್ನು ಹಸಿರುಮಯವಾಗಿಸಬೇಕು. ಈ ಸಂಬಂಧ ನಾಗರಿಕರಿಂದ ಬರುವ ಸಲಹೆಗಳನ್ನು ಸಂಗ್ರಹಿಸಿ ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದರು.

ಉಪ ಅರಣ್ಯ ಸಂರಕ್ಷಣಾಧಿಕಾರಿ ಸರೀನಾ ಸಿಕ್ಕಲಿಗರ್, ಕೆರೆಗಳ ವಿಭಾಗದ ಮುಖ್ಯ ಅಭಿಯಂತರ ವಿಜಯ್ ಕುಮಾರ್ ಹರಿದಾಸ್, ಆರ್‌ವಿ ತಾಂತ್ರಿಕ ಮಹಾವಿದ್ಯಾಲಯದ ಪ್ರಾಂಶುಪಾಲ ಕೆ.ಎನ್ ಸುಬ್ರಮಣ್ಯ ಇತರರಿದ್ದರು.



### ಹಸಿರು ಬೆಂಗಳೂರು; ಸಾರ್ವಜನಿಕರ ಸಲಹೆಗಳು

ನಗರದ ಸಾರ್ವಜನಿಕ- ಖಾಸಗಿ ಸ್ಥಳಗಳಲ್ಲಿ ಸಸಿಗಳನ್ನು ನೆಡುವುದು, ಕೆರೆಗಳಿಗೆ ಕಲುಷಿತ ನೀರು ಸೇರದಂತೆ ತಡೆಯುವುದು. ಶೇ.100ರಷ್ಟು ತ್ಯಾಜ್ಯ ನೀರು ಶುದ್ಧೀಕರಣ, ನಗರ ವ್ಯಾಪ್ತಿ ಅರಣ್ಯ ಸಂಪತ್ತನ್ನು ಸಂರಕ್ಷಿಸುವುದು, ಅಪಾರ್ಟ್‌ಮೆಂಟ್‌ಗಳಿಗೆ ಕಡ್ಡಾಯವಾಗಿ ಎಸ್‌ಟಿಪಿಗಳ ನಿರ್ಮಾಣ, ಆರ್ಕಿಟೆಕ್ಟ್‌ಗಳಿಗೆ ಮರ/ಸಸಿಗಳನ್ನು ಕಡಿಯದೆ ಗೃಹ ವಿನ್ಯಾಸಕ್ಕೆ ಕ್ರಮ. ನೆಡುವ ಗಿಡಗಳ ರಕ್ಷಣೆಗೆ ಒತ್ತು. ನಗರದ ಎಲ್ಲ ಕೆರೆಗಳ ಪುನಶ್ಚೇತನ ಹಾಗೂ ನಿರ್ವಹಣೆ ಅಂತರ್ಜಲ ಪುನಶ್ಚೇತನ ಮೂಲಕ ಅಂತರ್ಜಲ ಮಟ್ಟವನ್ನು ಹೆಚ್ಚಿಸಬೇಕು, ಮಕ್ಕಳಲ್ಲಿ ಪರಿಸರ ಜಾಗೃತಿ, ಪರಿಸರ ವೃದ್ಧಿಗೆ ಬಿಬಿಎಂಪಿ, ಜಲಮಂಡಳಿ, ಬಿಡಿಎ ಇಲಾಖೆಗಳು ಸಮನ್ವಯತೆ, ವಾಹನಗಳಿಂದ ವಾಯುಮಾಲಿನ್ಯ ತಡೆಗೆ ಜಾಗೃತಿ, ಉದ್ಯಾನಗಳಲ್ಲಿ ಗಿಡ-ಮರ ಅಭಿವೃದ್ಧಿ, ಮನೆಗಳ ಬಳಿ ಇಂಗು ಗುಂಡಿಗಳ ನಿರ್ಮಾಣಕ್ಕೆ ಒತ್ತು ನೀಡುವುದು.

### ಜಲಮಂಡಳಿ ಕಾರ್ಯಗಳಿಗೆ ಸಲಹೆ ನೀಡಿ

ಬೆಂಗಳೂರು: ಬ್ರ್ಯಾಂಡ್ ಬೆಂಗಳೂರಿಗಾಗಿ ಜಲಮಂಡಳಿಗೆ ಸಂಬಂಧಿಸಿದ ಕಾರ್ಯಗಳ ಕುರಿತು ಸಾರ್ವಜನಿಕರು, ಕ್ಷೇಮಾಭಿವೃದ್ಧಿ ಸಂಘಗಳು, ಜಲ ತಜ್ಞರು ಸಲಹೆ ನೀಡಲು ಕಾರ್ಯಕ್ರಮ ಆಯೋಜಿಸಲಾಗಿದೆ. ಆ.10ರಂದು ಬೆಳಗ್ಗೆ 9.30ರಿಂದ ಮಧ್ಯಾಹ್ನ 1.30ರವರೆಗೆ ಕುಮಾರಸ್ವಾಮಿ ಲೇಔಟ್‌ನ ದಯಾನಂದ ಸಾಗರ ಎಂಜಿನಿಯರಿಂಗ್ ಕಾಲೇಜು ಕ್ಯಾಂಪಸ್‌ನಲ್ಲಿರುವ ಡಾ.ಪ್ರೇಮಚಂದ್ರ ಸಾಗರ್ ಸಭಾಂಗಣದಲ್ಲಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಈ ಸಂಬಂಧ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯನ್ನು ನೋಡಲ್ ಏಜೆನ್ಸಿಯನ್ನಾಗಿ ನೇಮಿಸಲಾಗಿದೆ. ನಗರದ ನಾಗರಿಕರು, ಕ್ಷೇಮಾಭಿವೃದ್ಧಿ ಸಂಘಗಳು, ಜಲ ತಜ್ಞರು, ವಿದ್ಯಾರ್ಥಿಗಳು, ಸರ್ಕಾರೇತರ ಸಂಸ್ಥೆಗಳು, ಬೋಧಕ ವರ್ಗದವರು ಭಾಗವಹಿಸಿ ಸಲಹೆ ನೀಡುವಂತೆ ತಿಳಿಸಿದೆ.